86

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ತಿಪ್ಪಣ್ಣಪ್ಪರವರು ನಿಯಮ-72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಹಿಂದುಳಿದ ವರ್ಗಗಳ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರ ಉತ್ತರ**

*****

**ವಿಷಯ:** ಬೆಂಗಳೂರು ನಗರದಲ್ಲಿ ಭಕ್ತ ಕನಕದಾಸ, ನಾಡಪ್ರಭು ಕೆಂಪೇಗೌಡ, ಅಣ್ಣಾ ಬಸವಣ್ಣ, ಸಂಗೊಳ್ಳಿ ರಾಯಣ್ಣ ಮುಂತಾದ ಪ್ರತಿಮೆಗಳನ್ನು ಸರ್ಕಾರದ ವತಿಯಿಂದ ಸ್ಥಾಪನೆ ಮಾಡಿದ್ದು, ಅದೇ ಮಾದರಿಯಲ್ಲಿ ಶರಣರ ನಿಜ ಶರಣ ಅಂಬಿಗರ ಚೌಡಯ್ಯ ಪ್ರತಿಮೆಯನ್ನು ಸಹ ಸರ್ಕಾರ ಸ್ಥಾಪಿಸಬೇಕೆನ್ನುವ ವಿಷಯದ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯಬಯಸುತ್ತೇನೆ.

**ಉತ್ತರ:**ಸಂತರು ಶರಣರು, ಸ್ವಾತಂತ್ಯ ಹೋರಾಟಗಾರರು, ಗಣ್ಯ ವ್ಯಕ್ತಿಗಳು ಮುಂತಾದವರು ದೇಶಕ್ಕಾಗಿ ಸಲ್ಲಿಸಿದ ಸೇವೆ, ತ್ಯಾಗ ಮನೋಭಾವಗಳನ್ನು ಸ್ಮರಿಸುವ ಉದ್ದೇಶದಿಂದ ಅಂತಹವರ ಪ್ರತಿಮೆಗಳನ್ನು ಸರ್ಕಾರಿ ಕಛೇರಿಗಳು, ಸಾರ್ವಜನಿಕ ಪ್ರದೇಶಗಳಲ್ಲಿ ಸ್ಥಾಪನೆ ಮಾಡಲಾಗುತ್ತದೆ. ಆದರೆ, ಇಂತಹ ಪ್ರತಿಮೆಗಳನ್ನು ಸಮರ್ಪಕವಾಗಿ ನಿರ್ವಹಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಗಣ್ಯ ವಕ್ತಿಗಳ ಪ್ರತಿಮೆಗಳನ್ನು ಪ್ರತಿಷ್ಠಾಪಿಸುವ ಕುರಿತು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸುತ್ತೋಲೆ ಸಂಖ್ಯೆ:ಕಸಂವಾಪ್ರ 564 ಕಸಧ 2012 ರಲ್ಲಿ ಈ ಕೆಳಕಂಡಂತೆ ಮಾರ್ಗಸೂಚಿಗಳನ್ನು ಹೊರಡಿಸಲಾಗಿರುತ್ತದೆ.

(1) ಸರ್ಕಾರದ/ ಸಾರ್ವಜನಿಕ ಜಾಗದಲ್ಲಿ ಯಾವುದೇ ಸಂತರ/ಶರಣರ, ಜನ ನಾಯಕರ,ಸ್ವಾತಂತ್ರ್ಯ ಹೋರಾಟಗಾರರ ಅಥವಾ ಗಣ್ಯವ್ಯಕ್ತಿಗಳ ಪ್ರತಿಮೆಗಳನ್ನು ಸ್ಥಾಪಿಸುವುದು ನಿರ್ಬಂಧಿಸಿದೆ.

(2) ಪ್ರತಿಮೆ ಸ್ಥಾಪಿಸುವುದಕ್ಕೆ ಸಂಘ ಸಂಸ್ಥೆಗಳು ಮುಂದೆ ಬಂದಲ್ಲಿ ಪ್ರಾಥಮಿಕವಾಗಿ ಅಂತಹ ಸಂಘಸಂಸ್ಥೆಗಳು ತಮಗೆ ಸೇರಿದ ನಿವೇಶನದಲ್ಲಿ ಪ್ರತಿಮೆಯನ್ನು ನಿರ್ಮಿಸುವ ಹಾಗೂ ಅವುಗಳ ಭದ್ರತೆ ಮತ್ತು ಸಂರಕ್ಷಣೆಗೆ ಸಂಬಂಧಿಸಿದಂತೆ ಮುಚ್ಚಳಿಕೆ ನೀಡತಕ್ಕದ್ದು.

(3) ಮಂಜೂರಾತಿ ಪಡೆದು ಸ್ಥಾಪಿಸಲಾದ ಪ್ರತಿಮೆಗಳ ನಿರ್ವಹಣೆಯನ್ನು ಆಯಾ ಸಂಘ ಸಂಸ್ಥೆಗಳೇ ನಿರ್ವಹಿಸತಕ್ಕದ್ದು.

ಅಲ್ಲದೇ ಮಾನ್ಯ ಸರ್ವೋಚ್ಛ ನ್ಯಾಯಾಲಯವು SLP(ಸಿವಿಲ್)ಸಂಖ್ಯೆ:8519/2006 ರಲ್ಲಿ ದಿನಾಂಕ:18/01/2013ರಂದು ನೀಡಿದ ತೀರ್ಪಿನಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಪ್ರತಿಮೆ, ಪುತ್ಥಳಿ ಮತ್ತು ಇತ್ಯಾದಿಗಳನ್ನು ನಿರ್ಮಿಸುವುದನ್ನು ನಿಷೇಧಿಸುವಂತೆ ಆದೇಶಿಸಿರುವ ಹಿನ್ನೆಲೆಯಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಪುತ್ಥಳಿ ನಿರ್ಮಿಸುವುದನ್ನು ನಿರ್ಬಂಧಿಸಲಾಗಿದೆ.

ಕಡತ ಸಂಖ್ಯೆ: ಕಸಂವಾ 34 ಕವಿಸ 2023

**(ಶಿವರಾಜ.ಎಸ್.ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು.